ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಟಿ.ಕೆ.ಎಸ್ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ-1 ಎಂದು, ದೂರಿನ ದೃಢೀಕೃತ ನಕಲನ್ನು ನಿಪಿ-2 ಎಂದು, ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ನಿಪಿ-3 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ನಿಪಿ-4 ಎಂದು, ಐಎಂವಿ ವರದಿಯ ದೃಢೀಕೃತ ನಕಲನ್ನು ನಿಪಿ-5 ಎಂದು, ಗಾಯದ ಪ್ರಮಾಣ ಪತ್ರವನ್ನು ನಿಪಿ-6 ಎಂದು, 3 ಡಿಸ್ಚಾರ್ಜ್ ಸಮ್ಮರಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-7 ರಿಂದ ನಿಪಿ-9 ಎಂದು, 27 ವೈದ್ಯಕೀಯ ಬಿಲ್ಲುಗಳನ್ನು ಹಾಜರುಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-10 ಎಂದು, 2 ಎಕ್ಸ ರೇ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-11 ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ ಬಿ.ಟಿ)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು